ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ತುಂಬೆ ಕಿಂಡಿ ಅಣೆಕಟ್ಟುಗಳ ಬಗ್ಗೆ

ಶ್ರೀ ಐವನ್ ಡಿ' ಸೋಜಾ(ನಾಮನಿರ್ದೇಶನ ಹೊಂದಿದವರು):-

1049 (1281) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಗಳೂರು ಮಹಾನಗರಪಾಲಿಕೆಯಲ್ಲಿ ತುಂಬೆ ಕಿಂಡಿ ಅಣೆಕಟ್ಟಿನಲ್ಲಿ ನೀರಿನ ಮಟ್ಟವನ್ನು ಏರಿಸಿ ಮಂಗಳೂರು ನಗರಕ್ಕೆ ಮತ್ತು ಸುತ್ತಮುತ್ತಲಿನ ಗ್ರಾಮಗಳಿಗೆ 24 X 7 ನೀರನ್ನು ಒದಗಿಸಲು ಸರ್ಕಾರಕ್ಕೆ ತಗಲುವ ವೆಚ್ಚ ಎಷ್ಟು ; ಇದನ್ನು ಸರ್ಕಾರವು ಪೂರೈಸಲು ಸಾಧ್ಯವಾಗುವುದೇ; (ವಿವರ ನೀಡುವುದು)

(ಆ) ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಹಲವಾರು ವರ್ಷಗಳಿಂದ ಕುಡಿಯುವ ನೀರಿನ ಸಮಸ್ಯೆಗಳಿದ್ದು, ಕಿಂಡಿ ಅಣೆಕಟ್ಟಿನ ನೀರಿನ ಮಟ್ಟ ಏರಿಸಿದಲ್ಲಿ 24 X 7 ನೀರಿನ ಪೂರೈಕೆ ಯೋಜನೆ ಸ್ಮಾರ್ಟ್‌ಸಿಟಿ ಯೋಜನೆಗೆ ಸೇರಿಸಲು ಸರ್ಕಾರ ನಿರ್ದೇಶನ ನೀಡುವುದೇ ; ಇದಕ್ಕಾಗಿ ಸರ್ಕಾರಕ್ಕೆ ಏನಾದರೂ ತೊಂದರೆಗಳಿದೆಯೇ; (ವಿವರ ನೀಡುವುದು) ಈ ಯೋಜನೆಗೆ ತಗಲುವ ವೆಚ್ಚ ಎಷ್ಟು ; (ವಿವರ ನೀಡುವುದು)

(ಇ) ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಬಿಲ್ಲು ಪಾವತಿಸದೇ ಇರುವ ಕಮರ್ಷಿಯಲ್ ಮತ್ತು ವಾಣಿಜ್ಯ ಸಂಕೀರ್ಣಗಳ ವಿವರ ನೀಡುವುದು ವಸೂಲು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?